**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ,**
**ಶೋರಾಪುರ.**
**ಸಿ.ಸಿ. ನಂ.218/2019**

| | | |
|---|---|---|
| ಸಾಕ್ಷಿದಾರರ ಹೆಸರು | ಃ ನಿಂಗಣ್ಣ | ಸಿ.ಡಬ್ಲ್ಯೂ ಃ 03 |
| ತಂದೆ ಹೆಸರು | ಃ ಗುರುಬಸಪ್ಪ ವನಕ್ಯಾಳ | ಪಿ.ಡಬ್ಲ್ಯೂ ಃ 05 |
| ವಯಸ್ಸು | ಃ 37 ವರ್ಷ | |
| ವೃತ್ತಿ | ಃ ಒಕ್ಕಲುತನ | |
| ವಾಸ ಸ್ಥಳ | ಃ ನಗನೂರ | |

**ಸಾಕ್ಷಿಗೆ ಇಂದು ದಿನಾಂಕಃ 24.02.2026 ರಂದು ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ.ಸ.ಅ.ರವರಿಂದಃ**

ನನಗೆ ಯಾವುದೇ ಸಾಕ್ಷಿದಾರರ ಪರಿಚಯ ಇರುವುದಿಲ್ಲ. ನ್ಯಾಯಾಲಯದ ಮುಂದಿರುವ ಒಬ್ಬ ಆರೋಪಿ ಪರಿಚಯ ಇರುತ್ತಾರೆ, ಇನ್ನೂಬ್ಬ ಆರೋಪಿ ಪರಿಚಯ ಇರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನನಗೆ ಈ ಪ್ರಕರಣ ಕುರಿತು ಏನು ಮಾಹಿತಿ ಇರುವುದಿಲ್ಲ. ಪೋಲೀಸರ ಕೋರಿಕೆಯ ಮೇರೆಗೆ ನಾನು ಒಂದು ದಾಖಲೆ ಮೇಲೆ ಸಹಿ ಮಾಡಿರುತ್ತೇನೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿ ಕೇಳಲಾಗಿ ಅದರಲ್ಲಿರುವ ಸಹಿ ನನ್ನದೇ ಎಂದು ನುಡಿಯುತ್ತಾರೆ. ಸದರಿ ಪಂಚನಾಮೆ ಘಟನಾ ಸ್ಥಳದ ಪಂಚನಾಮೆಯಾಗಿದ್ದು ಅದನ್ನು ನಿಪಿ-6 ಎಂದು ಸಾಕ್ಷಿಯ ಸಹಿಯನ್ನು ನಿಪಿ.6(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಸ.ಸ.ಅ ರವರ ವಿನಂತಿ ಮೇರೆಗೆ ಪರಿಗಣಿಸಿ ಪಾಟೀ ಸವಾಲಿಗೆ ಅವಕಾಶ ನೀಡಲಾಯಿತು.)**

**ಪಾಟೀ ಸವಾಲು ಃ ಅಭೀಯೋಜನೆ ಪರ ಸ.ಸ.ರವರಿಂದಃ**

ದಿನಾಂಕ 27-02-2014 ರಂದು ಬೆಳಗ್ಗೆ 10 ರಿಂದ 11 ಗಂಟೆ ಅವದಿಯಲ್ಲಿ ಚಾಸಾ 1 ರವರು ತೋರಿಸಿದ ಘಟನಾ ಸ್ಥಳದಲ್ಲಿ ನನ್ನ ಮತ್ತು ಚಾಸಾ 2 ರವರ ಸಮಕ್ಷಮ ಘಟನಾ ಸ್ಥಾಳದ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಈಗ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಃ** ಇಲ್ಲ.

(ಸಾಕ್ಷಿದಾರರ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಪ್ರಕಾರ ಬೆರಳಚ್ಚು ಮಾಡಲಾಯಿತು)

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಶೋರಾಪುರ.